Phone: 08282-257424
E-Mail: kuhrmsection@gmail.com

Fax: 08282-256262
Website: www.kuvempu.ac.in

ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ ಶಂಕರಘಟ್ಟ – 577 451

ಮಾನವ ಸಂಪನ್ಮೂಲ ಮತ್ತು ನಿರ್ವಹಣೆ ವಿಭಾಗ

ಸಂಖ್ಯೆ: ಕುವಿ: ಮಾಸನಿ-7/ 7693/2019-20 ದಿನಾಂಕ:23-03-2020

ಸುತ್ತೋಲೆ

ವಿಷಯ: ಕೋವಿಡ್-19 (ಕೊರೊನಾ ವೈರಸ್) ನಿಯಂತ್ರಿಸುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯ ಹಾಗೂ ಘಟಕ ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳ ಬೋಧಕ / ಬೋಧಕೇತರ / ಅತಿಥಿ ಉಪನ್ಯಾಸಕರು / ಏಜೆನ್ಸಿ ಸಿಬ್ಬಂದಿಗಳಿಗೆ ರಜೆ ಘೋಷಿಸುವ ಕುರಿತು.

ಉಲ್ಲೇಖ:
1. MHRD, New Delhi – D.O.Letter No:Secy(HE)/ MHRD/ 2020 dated: 21-03-2020
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:23-03-2020

****

ಮಾನ್ಯ ಕುಲಪತಿಗಳ ಆದೇಶದ ಮೇರೆಗೆ, ವಿಶ್ವವಿದ್ಯಾನಿಲಯದಲ್ಲಿ ಕೋವಿಡ್-19 (ಕೊರೊನಾ ವೈರಸ್) ತಡೆಗಟ್ಟುವಿಕೆ ಸಂಬಂಧ ಮುಂಜಾಗ್ರತಾ ಕ್ರಮವಾಗಿ ವಿಶ್ವವಿದ್ಯಾಲಯ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಸ್ನಾತಕೋತ್ತರ ಕೇಂದ್ರ, ಕಡೂರು / ಚಿಕ್ಕಮಗಳೂರು ಹಾಗೂ ಘಟಕ ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ದಿನಾಂಕ: 28-03-2020 ರವರೆಗೆ 15 ದಿಗಳ ರಜೆ ಘೋಷಿಸಲಾಗಿದೆ.

ಮುಂದುವರೆದು ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಹಾಗೂ ಸಾಕ್ಷರತೆ, ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ಭಾರತ ಸರ್ಕಾರ ನವದೆಹಲಿ ಇವರ ಉಲ್ಲೇಖ (1)ರ ಸೂಚನೆಗಳನ್ವಯ ಈ ಕೆಳಕಂಡಂತೆ ಕ್ರಮವಹಿಸಲು ಸೂಚಿಸಲಾಗಿದೆ.

1. ವಿಶ್ವವಿದ್ಯಾಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು ಹಾಗೂ ಘಟಕ / ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು 31-03-2020ರವರೆಗೆ ಮನೆಯಿಂದಲೇ ವಿಶ್ವವಿದ್ಯಾಲಯದ / ಕಾಲೇಜಿನ ಕಾರ್ಯಗಳನ್ನು ನಿರ್ವಹಿಸಲು ಅನುಮತಿ ನೀಡುವುದು.
2. ಬೋಧಕ ಸಿಬ್ಬಂದಿವರ್ಗದವರು ಈ ಅವಧಿಯಲ್ಲಿ ಕೆಳಕಂಡಂತೆ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು.
    - ಆನ್‌ಲೈನ್ ಮೂಲಕ ಬೋಧನೆ ಮತ್ತು ಆನ್‌ಲೈನ್ ಮೂಲಕ ಮೌಲ್ಯಮಾಪನ ಮಾಡಲು ಅಗತ್ಯವಿರುವ ಪಠ್ಯವಸ್ತು ಅಭಿವೃದ್ಧಿ ಪಡಿಸುವುದು.
    - ಮುಂದಿನ ಶೈಕ್ಷಣಿಕ ವರ್ಷಕ್ಕೆ ಅಗತ್ಯವಿರುವ ಪಠ್ಯಯೋಜನೆ / ಟಿಪ್ಪಣಿಯನ್ನು ಸಿದ್ಧಪಡಿಸುವುದು. ಹಾಗೂ ತಾವು ಬೋಧಿಸುವ ವಿಷಯದ ಪಠ್ಯವಸ್ತುವನ್ನು ಅಭಿವೃದ್ಧಿಪಡಿಸುವುದು.
    - ಲೇಖನಗಳನ್ನು ಬರೆಯುವುದು.
    - ಕೊಶ್ಚನ್ ಬ್ಯಾಂಕ್‌ಗಾಗಿ ವಿನೂತನ ಪ್ರಶ್ನೆಗಳನ್ನು ಸಿದ್ಧಪಡಿಸುವುದು. ಏಕ್ ಭಾರತ್ ಶ್ರೇಷ್ಠ್ ಭಾರತ್ ಕಾರ್ಯಕ್ರಮಕ್ಕೆ ವಿನೂತನ ಯೋಜನೆ ಸಿದ್ದಪಡಿಸುವುದು.
3. ದಿನಾಂಕ: 31-03-2020 ರವರೆಗೆ ಬೋಧಕ / ಬೋಧಕೇತರ / ಅತಿಥಿ ಉಪನ್ಯಾಸಕರು / ಏಜೆನ್ಸಿ ಸಿಬ್ಬಂದಿ ವರ್ಗದವರ ರಜಾ ಅವಧಿಯನ್ನು ಕರ್ತವ್ಯ ಎಂದು ಪರಿಗಣಿಸುವುದು.

---2

4. ಹಾಸ್ಟೆಲ್‌ಗಳಲ್ಲಿ / ವಸತಿಯುಕ್ತ ಕಾಲೇಜುಗಳಲ್ಲಿ ಉಳಿದುಕೊಂಡಿರುವ ವಿದೇಶಿ ವಿದ್ಯಾರ್ಥಿಗಳು ಹಾಸ್ಟೆಲ್‌ಗಳಲ್ಲಿ / ವಸತಿಯುಕ್ತ ಕಾಲೇಜುಗಳಲ್ಲಿಯೇ ಉಳಿದುಕೊಳ್ಳಲು ಅಗತ್ಯ ಸೌಲಭ್ಯ ಒದಗಿಸುವುದು ಹಾಗೂ ಅವರ ಸುರಕ್ಷತೆಗಾಗಿ ಎಲ್ಲಾ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.

5. ಬೋಧಕ / ಬೋಧಕೇತರ / ಅತಿಥಿ ಉಪನ್ಯಾಸಕರು / ಏಜೆನ್ಸಿ ಸಿಬ್ಬಂದಿ ವರ್ಗದವರನ್ನು ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ಅನುಕೂಲವಾಗುವಂತೆ ಅವರ ದೂರವಾಣೀ ಸಂಖ್ಯೆಗಳನ್ನು ಮತ್ತು ಇ-ಮೇಲ್ ವಿಳಾಸಗಳನ್ನು ವಿಭಾಗದ ಮುಖ್ಯಸ್ಥರುಗಳು / ಪ್ರಾಂಶುಪಾಲರು / ಉಪಕುಲಸಚಿವರು / ಸಹಾಯಕ ಕುಲಸಚಿವರುಗಳು ಪಡೆದುಕೊಳ್ಳುವುದು.

6. ಈ ರಜಾ ಅವಧಿಯಲ್ಲಿ ಬೋಧಕ / ಬೋಧಕೇತರ / ಅತಿಥಿ ಉಪನ್ಯಾಸಕರು / ಏಜೆನ್ಸಿ ಸಿಬ್ಬಂದಿ ವರ್ಗದವರು ಯಾವುದೇ ಕಾರಣಕ್ಕೂ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ. ಸರ್ಕಾರಕ್ಕೆ / ವಿಶ್ವವಿದ್ಯಾಲಯಕ್ಕೆ ಅಗತ್ಯವಿದ್ದಾಗ ಕಡ್ಡಾಯವಾಗಿ ಸೇವೆಗೆ ಹಾಜರಾಗತಕ್ಕದ್ದು.

7. ವಿಶ್ವವಿದ್ಯಾಲಯದ ಆರೋಗ್ಯ ಕೇಂದ್ರ ಸಿಬ್ಬಂದಿಗಳು ಎಂದಿನಂತೆ ಕಾರ್ಯ ನಿರ್ವಹಿಸುವುದು, ಇನ್ನುಳಿದ ಅಧಿಕಾರಿಗಳು / ಸಿಬ್ಬಂದಿಗಳು ಅಗತ್ಯ ಮತ್ತು ತುರ್ತು ಸಂದರ್ಭದಲ್ಲಿ ಕಛೇರಿಗೆ ಹಾಜರಾಗಿ ಕರ್ತವ್ಯ ನಿರ್ವಹಿಸುವುದು.

23/3/2020

ಕುಲಸಚಿವ

ಕುಲಸಚಿವ
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577 451. ಶಿವಮೊಗ್ಗ ಜಿಲ್ಲೆ

ಗೆ:

1. ಕುಲಸಚಿವರು(ಪರೀಕ್ಷಾಂಗ), ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳಿಗೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ/ ಶಿವಮೊಗ್ಗ/ ಕಡೂರು.
4. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
5. ಕಾರ್ಯಪಾಲಕ ಅಭಿಯಂತರರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
6. ಸಹ್ಯಾದ್ರಿ ವಿಜ್ಞಾನ / ಸಹ್ಯಾದ್ರಿ ಕಲಾ / ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜುಗಳ ಪ್ರಾಚಾರ್ಯರುಗಳಿಗೆ, ಶಿವಮೊಗ್ಗ.
7. ನಿರ್ದೇಶಕರು: - ಎಸ್ಟೇಟ್ /ಪ್ರಸಾರಾಂಗ / ವಿದ್ಯಾರ್ಥಿ ಕ್ಷೇಮಪಾಲನೆ / ದೂರ ಶಿಕ್ಷಣ ನಿರ್ದೇಶನಾಲಯ/ ವಯಸ್ಕರ ಮುಂದುವರೆದ ಶಿಕ್ಷಣ/ ವಿಸ್ತರಣೆ ಮತ್ತು ಕ್ಷೇತ್ರ ಸಂಪರ್ಕ ವಿಭಾಗ/ ಕಾಲೇಜು ಅಭಿವೃದ್ಧಿ ಪರಿಷತ್ತು/ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿ / ಅಂಬೇಡ್ಕರ್ ಅಧ್ಯಯನ ಕೇಂದ್ರ, / ಸ್ಥಳೀಯ ಸಂಸ್ಕೃತಿ ಅಧ್ಯಯನ ಕೇಂದ್ರ /ಅಭಿವೃದ್ಧಿ ವಿಭಾಗ/ ದೈಹಿಕ ಶಿಕ್ಷಣ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
8. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ ಬಿ.ಹೆಚ್.ರಸ್ತೆ, ಕಡೂರು
9. ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಐಡಿಎಸ್‌ಜಿ ಕಾಲೇಜು ಆವರಣ, ಜ್ಯೋತಿನಗರ, ಚಿಕ್ಕಮಗಳೂರು.
10. ಎಲ್ಲಾ ಉಪಕುಲಸಚಿವರಿಗೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
11. ಎಲ್ಲಾ ಸಹಾಯಕ ಕುಲಸಚಿವರು/ ಅಧೀಕ್ಷಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
12. ಸಂಯೋಜನಾಧಿಕಾರಿಗಳು, ಐ.ಕ್ಯೂ.ಎ.ಸಿ. / ಮಹಿಳೆಯರ ಮೂಲ ಸೌಕರ್ಯಗಳ ಅಭಿವೃದ್ಧಿ ಘಟಕ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
13. ಶಿಕ್ಷಕ ಸಲಹೆಗಾರರು, ಸ್ನಾತಕೋತ್ತರ ಪುರುಷರ:ಮಹಿಳಾ ವಿದ್ಯಾರ್ಥಿಗಳ ನಿಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
14. ಕಾರ್ಯಕ್ರಮ ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನಾ ವಿಭಾಗ, ನಗರ ಕಛೇರಿ ಬೈಪಾಸ್ ರಸ್ತೆ, ಶಿವಮೊಗ್ಗ.
15. ಸಂಚಾಲಕರು, ಪಠ್ಯೇತರ ಚಟುವಟಿಕೆ ವಿಭಾಗ, ಎಸ್.ಸಿ/ಎಸ್.ಟಿ. ಸೆಲ್/ ಓ.ಬಿ.ಸಿ. ಅಂಬೇಡ್ಕರ್ ಅಧ್ಯಯನ ಪೀಠ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
16. ಸಾರ್ವಜನಿಕ ಸಂಪರ್ಕ ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
17. ಆಪ್ತ ಕಾರ್ಯಾಲಯ: ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪರೀಕ್ಷಾಂಗ):ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
18. ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
19. ಪ್ರಿನ್ಸಿಪಾಲರು, ಎಸ್.ಎಂ.ಆರ್.ಪ್ರಥಮ ದರ್ಜೆ ಕಾಲೇಜು, ಶಂಕರಘಟ್ಟ.
20. ಕಂಪ್ಯೂಟರ್ ಕೇಂದ್ರ, ಯು.ಸಿ.ಸಿ.ಎಫ್., ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
21. ವ್ಯವಸ್ಥಾಪಕರು, ವಿಶ್ವವಿದ್ಯಾಲಯದ ಅತಿಥಿ ಗೃಹ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
22. ವೈದ್ಯಾಧಿಕಾರಿಗಳು, ವಿಶ್ವವಿದ್ಯಾಲಯ ಆರೋಗ್ಯ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
23. ಕಛೇರಿ ಪ್ರತಿ.